**ಕರ್ನಾಟಕ ವಿಧಾನ ಪರಿಷತ್ತು**
**154ನೇ ಅಧಿವೇಶನ**
**ಸಂತಾಪ ಸೂಚನೆ**

**ಮಾನ್ಯ ಸಭಾಪತಿಯವರು:-**

**ಪದ್ಮಶ್ರೀ ಪುರಸ್ಕೃತ ವೃಕ್ಷ ಮಾತೆ ತುಳಸಿಗೌಡ ಅವರು ನಿಧನರಾದುದನ್ನು ಈ ಸದನಕ್ಕೆ ತಿಳಿಸಲು ವಿಷಾಧಿಸುತ್ತೇನೆ.**

**ತುಳಸಿಗೌಡ**

ಪದ್ಮಶ್ರೀ ಪುರಸ್ಕೃತ ವೃಕ್ಷ ಮಾತೆ ತುಳಸಿಗೌಡ **ಅವರು ದಿನಾಂಕ:16.12.2024ರಂದು ನಿಧನ ಹೊಂದಿರುತ್ತಾರೆ.**

**1944ರ ಡಿಸೆಂಬರ್ 16ರಂದು ಅಂಕೋಲ ತಾಲ್ಲೂಕಿನ ಹೊನ್ನಳ್ಳಿ ಗ್ರಾಮದ ಹಾಲಕ್ಕಿ ಬುಡಕಟ್ಟು ಕುಟುಂಬದಲ್ಲಿ ಜನಿಸಿದ್ದ ಶ್ರೀಯುತರು 'ಪರಿಸರವೇ ನನ್ನ ಉಸಿರು' ಎಂದು ತಮ್ಮ ಜೀವನದುದ್ದಕ್ಕೂ ಲಕ್ಷಾಂತರ ಮರಗಳನ್ನು ಬೆಳೆಸಿ ಪಾಲನೆ ಪೋಷಣೆ ಮಾಡುವ ಮೂಲಕ 'ವೃಕ್ಷ ಮಾತೆ' ಎಂದು ಕರೆಯಲ್ಪಡುತ್ತಿದ್ದರು. ಯಾವುದೇ ಔಪಚಾರಿಕ ಶಿಕ್ಷಣವಿಲ್ಲದಿದ್ದರೂ ಶಾಲಾ ಮಕ್ಕಳಿಗೆ ಗಿಡಗಳನ್ನು ಬೆಳೆಸುವ ತರಬೇತಿ ನೀಡುತ್ತಿದ್ದರು. ಪ್ರತಿ ವರ್ಷ 30 ಸಾವಿರ ಸಸಿಗಳನ್ನು ಪೋಷಿಸಿದ ಕೀರ್ತಿಗೆ ಭಾಜನರಾಗಿದ್ದರು. ಶ್ರೀಯುತರಿಗೆ ಅರಣ್ಯ ತಿಳುವಳಿಕೆ ಅಪಾರವಾಗಿತ್ತು. ಸಾಗವಾನಿಯನ್ನೇ ಹೆಚ್ಚಾಗಿ ಬೆಳೆಸುತ್ತಿದ್ದ ಇವರು ಇದರ ಹೊರತಾಗಿ ಎಳ್ಳು, ನಂದಿ, ಪೀಫುಲ್, ಫಿಕಸ್, ಬಿದಿರು, ರಾಟನ್, ಜಮುನ್, ಗೋಡಂಬಿ, ಮತ್ತಿ ಮುಂತಾದ ಮರಗಳ ಎಲ್ಲಾ ಮಾಹಿತಿಗಳ ಅರಿವನ್ನು ಹೊಂದಿದ್ದರು. ಪರಿಸರದ ಮೇಲಿನ ಈಕೆಯ ಪ್ರೀತಿಯನ್ನು ಕಂಡು ಅಂದಿನ ಅರಣ್ಯಾಧಿಕಾರಿಯವರು ಅರಣ್ಯದಲ್ಲಿ ಬೀಜಗಳನ್ನು ಶೇಖರಣೆ ಮಾಡಿ ಸಸಿಗಳನ್ನಾಗಿ ಮಾಡಿಕೊಡುವ ಹಾಗೂ ಪೋಷಿಸುವ ದಿನಗೂಲಿ ನೌಕರಿಯನ್ನು ನೀಡಿದ್ದರು. ಕಾಡಿನಿಂದ ಅಪರೂಪದ ಬೀಜ ಸಂಗ್ರಹಿಸಿ, ಸಸಿಗಳನ್ನು ಬೆಳಸಿ ಅದೇ ಸಸಿಗಳನ್ನು ಅರಣ್ಯದಲ್ಲಿ, ಸರ್ಕಾರಿ ಕಛೇರಿ, ಶಾಲಾ ಆವರಣ, ರಸ್ತೆಯ ಪಕ್ಕದಲ್ಲಿ ಬೆಳೆಸಿದ ಕೀರ್ತಿ ಇವರದ್ದಾಗಿದೆ. ಯಾವ ಯಾವ ಮರದಿಂದ ಏನೇನು ಪ್ರಯೋಜನ, ಯಾವ ಜಾತಿಯ ಸಸಿಗಳಿಗೆ ಎಷ್ಟು ನೀರಿನ ಅವಶ್ಯಕತೆ ಇದೆ ಮುಂತಾದ ಹಲವಾರು ಮಾಹಿತಿಗಳ ಕಣಜವಾಗಿದ್ದ ಶ್ರೀಯುತರು 'ಅರಣ್ಯದ ವಿಶ್ವಕೋಶ' ಎಂದೇ ಜನಜನಿತರಾಗಿದ್ದರು.**

**ಶ್ರೀಯುತರ ಪರಿಸರ ಕಾಯಕಕ್ಕೆ ಕೇಂದ್ರ ಸರ್ಕಾರದಿಂದ ಪದ್ಮಶ್ರೀ ಪ್ರಶಸ್ತಿ, ಪ್ರಿಯದರ್ಶಿನಿ ವೃಕ್ಷಮಿತ್ರ ಪ್ರಶಸ್ತಿಗಳಲ್ಲದೆ ರಾಜ್ಯೋತ್ಸವ ಪ್ರಶಸ್ತಿಗೂ ಸಹ ಭಾಜನರಾಗಿದ್ದರು.**

**ಶ್ರೀಯುತರ ನಿಧನದಿಂದಾಗಿ ರಾಜ್ಯ ಹಾಗೂ ರಾಷ್ಟ್ರವು ಒಬ್ಬ ಶ್ರೇಷ್ಠ ಪರಿಸರ 'ವೃಕ್ಷ ಮಾತೆ'ಯೊಬ್ಬರನ್ನು ಕಳೆದುಕೊಂಡಂತಾಗಿದೆ.**

**ಸಭಾನಾಯಕರು ಮತ್ತು ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:-**

ಮೃತರ ಆತ್ಮಕ್ಕೆ ಸದ್ಗತಿಯನ್ನು ಕೋರುತ್ತಾ, ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ಪರಮಾತ್ಮನು ಕರುಣಿಸಲೆಂದು ಪ್ರಾರ್ಥಿಸುತ್ತೇನೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**(ಮೌನ ಆಚರಿಸಿದ ನಂತರ)**

ಸದನದಲ್ಲಿ ಪ್ರಸ್ತಾಪಿಸಿದ ಸಂತಾಪ ಸೂಚನೆಯ ನಿರ್ಣಯವನ್ನು ಮೃತ ಗಣ್ಯರ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.